# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಎ.ಆಂಜನೇಯ, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ರಾಯಚೂರು ಇವರ ಅಮಾನತ್ತನ್ನು ತೆರವುಗೊಳಿಸಿ ಸೇವೆಗೆ ಪುನರ್ ಸ್ಥಾಪಿಸಿ, ಸ್ಥಳನಿಯುಕ್ತಿಗೊಳಿಸುವ ಬಗ್ಗೆ - ಆದೇಶ.

**ಓದಲಾಗಿದೆ:-**

1. ಮುಖ್ಯ ಇಂಜಿನಿಯರ್, ಪಂ.ರಾ.ಇಂ ಇಲಾಖೆ, ಬೆಂಗಳೂರು ಇವರ ಪತ್ರ ಸಂ :ಮುಇಂ/ಪಂ.ರಾ.ಇಂ.ಇ/ಕಾ.ಇಂ-1/ತಾಂಸ-1/ಸಿಇಂ-1/2019-20 /3777ದಿನಾಂಕ:18.03.2020
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 55 ಜಿಪಅ 2020, ದಿನಾಂಕ: 31.03.2020
3. ಶ್ರೀ ಎ.ಆಂಜನೇಯ ಇವರ ಮನವಿ ದಿನಾಂಕ:02.04.2020

**ಪ್ರಸ್ತಾವನೆ:-**

ಶ್ರೀ ಎ.ಆಂಜನೇಯ, ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ರಾಯಚೂರು ಇವರು 2018-19 ನೇ ಸಾಲಿನ ವಿವಿಧ ಅನುಮೋದಿತ ಕಾಮಗಾರಿಗಳ ಟೆಂಡರ್ ಗಳಲ್ಲಿ ದಾಖಲೆಗಳ ಪರಿಶೀಲನೆ ನಡೆಸದೆ ಗುತ್ತಿಗೆದಾರರ ತಾಂತ್ರಿಕ ಬಿಡ್ ಗಳನ್ನು ಅನರ್ಹಗೊಳಿಸಲು ನಿಯಮಬಾಹಿರವಾಗಿ ಶಿಫಾರಸ್ಸು ಮಾಡಿ ಕಾಮಗಾರಿಗಳ ಅನುಷ್ಠಾನದಲ್ಲಿ ವಿಳಂಬವಾಗಲು ಕಾರಣವಾಗಿದ್ದು, ಈ ಸಂಬಂಧ ಮುಖ್ಯ ಇಂಜಿನಿಯರ್, ಪಂ.ರಾ.ಇಂ ಇಲಾಖೆ ಹಾಗೂ ಅಧೀಕ್ಷಕ ಇಂಜಿನಿಯರ್, ಪಂ.ರಾ.ಇಂ ವೃತ್ತ, ಬಳ್ಳಾರಿ ಇವರುಗಳು ನೀಡಿದ ಸೂಚನೆಗಳನ್ನು ಉಲ್ಲಂಘಿಸಿ ತೀವ್ರತರವಾದ ಕರ್ತವ್ಯಲೋಪ ಎಸಗಿರುವ ಆರೋಪಕ್ಕೆ ಸಂಬಂಧಿಸಿದಂತೆ ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು ಇವರು ಮೇಲೆ ಓದಲಾದ ಕ್ರಮಾಂಕ(1) ರ ಪತ್ರದೊಂದಿಗೆ ಸಲ್ಲಿಸಿದ್ದ ವರದಿಯನ್ನಾಧರಿಸಿ ಸದರಿಯವರನ್ನು ಮೇಲೆ ಓದಲಾದ ಕ್ರಮಾಂಕ(2) ರ ಆದೇಶದಲ್ಲಿ ಸೇವೆಯಿಂದ ಅಮಾನತ್ತುಗೊಳಿಸಲಾಗಿದೆ.

ಶ್ರೀ ಎ.ಆಂಜನೇಯ ಇವರು ಮೇಲೆ ಓದಲಾದ ಕ್ರಮಾಂಕ(3) ರಲ್ಲಿ ಮನವಿ ಸಲ್ಲಿಸಿ ತಾವು ಯಾವುದೇ ಕರ್ತವ್ಯಲೋಪ ಎಸಗಿರುವುದಿಲ್ಲವೆಂದು , ಕೇವಲ ಸಣ್ಣಪುಟ್ಟ ಪ್ರಕ್ರಿಯೆ ಲೋಪಗಳನ್ನು ಆಧರಿಸಿ ಅಮಾನತ್ತು ಮಾಡಿರುವುದರಿಂದ ತಮಗೆ ತೀವ್ರ ನೋವುಂಟು ಮಾಡಿದ್ದು, ಸದರಿ ಅಮಾನತ್ತನ್ನು ತೆರವುಗೊಳಿಸಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ದಕ್ಷತೆಯಿಂದ ಕೆಲಸ ನಿರ್ವಹಿಸಲು ಅವಕಾಶ ಮಾಡಿಕೊಡಬೇಕೆಂದು ಕೋರಿರುತ್ತಾರೆ.

ಸರ್ಕಾರವು ಶ್ರೀ ಎ.ಆಂಜನೇಯ ಇವರ ಮನವಿಯನ್ನು ಪರಿಗಣಿಸಿರುತ್ತದೆ. ಸದರಿಯವರು ಪಂ.ರಾ.ಇಂ ವಿಭಾಗ, ರಾಯಚೂರು ಇಲ್ಲಿ ಕಾರ್ಯನಿರ್ವಹಿಸುತ್ತಿದ್ದ ಅವಧಿಯಲ್ಲಿ ಟೆಂಡರ್ ಪ್ರಕ್ರಿಯೆಯನ್ನು ನಿಯಮಾನುಸಾರ ಪರಿಶೀಲಿಸಿ ಕ್ರಮವಹಿಸದೇ ಇರುವುದು ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ ಸದರಿಯವರು ಸಾಕ್ಷಿ ಹಾಗೂ ದಾಖಲೆಗಳನ್ನು ತಿರುಚುವ ಸಂಭವವಿರುವುದರಿಂದ ಇವರ ಹೇಳಿಕೆಯನ್ನು ಪರಿಗಣಿಸಿ, ಸದರಿಯವರ ವಿರುದ್ಧದ ಶಿಸ್ತು ಕ್ರಮಗಳನ್ನು ಬಾಕಿ ಇರಿಸಿ ಅವರ ಅಮಾನತ್ತನ್ನು ತೆರವುಗೊಳಿಸಿ ರಾಯಚೂರು ಜಿಲ್ಲೆಯನ್ನು

ಹೊರತುಪಡಿಸಿ ಬೇರೆ ಕಡೆಗೆ ಸೇವೆಗೆ ಪುನರ್ ಸ್ಥಾಪಿಸಲು ಸರ್ಕಾರವು ನಿರ್ಧರಿಸಿರುತ್ತದೆ. ಆದ್ದರಿಂದ ಈ ಆದೇಶ

**ಆದೇಶ ಸಂಖ್ಯೆ: ಗ್ರಾಅಪ 79 ಜಿಪಅ 2020, ದಿನಾಂಕ: 27.04.2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಸರ್ಕಾರವು ಶ್ರೀ ಎ.ಆಂಜನೇಯ, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ರಾಯಚೂರು ಇವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಕೈಗೊಳ್ಳಬಹುದಾದ ಕ್ರಮಗಳನ್ನು ಬಾಕಿ ಇರಿಸಿ, ಸದರಿಯವರ ಅಮಾನತ್ತನ್ನು ತೆರವುಗೊಳಿಸಿ ಸೇವೆಗೆ ಪುನರ್ ಸ್ಥಾಪಿಸಿ ಆದೇಶಿಸಿದೆ.

ಶ್ರೀ ಎ.ಆಂಜನೇಯ, ಕಾರ್ಯಪಾಲಕ ಅಭಿಯಂತರರು ಇವರನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ವಿಜಯಪುರ ಇಲ್ಲಿನ ಖಾಲಿ ಹುದ್ದೆಗೆ ಸ್ಥಳನಿಯುಕ್ತಿಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶದನುಸಾರ
ಮತ್ತು ಅವರ ಹೆಸರಿನಲ್ಲಿ

27/04/2020

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಇವರಿಗೆ:

೧. ಮಹಾಲೇಖಪಾಲರು, (ಲೆಕ್ಕಪತ್ರ 1 & 2)/(ಆಡಿಟ್), ಕರ್ನಾಟಕ, ಬೆಂಗಳೂರು.
೨. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
೩. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು
೪. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು(ದ), ಕೆ.ಆರ್ ವೃತ್ತ, ಬೆಂಗಳೂರು.
೫. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು/ವಿಜಯಪುರ
೬. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ(ಸೇವೆಗಳು-ಎ&ಸಿ)
೭. ಸಂಬಂಧಿಸಿದ ಅಧಿಕಾರಿಗೆ
೮. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು.
೯. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ/ಉಪಕಾರ್ಯದರ್ಶಿ ಇವರ ಆಪ್ತ ಕಾರ್ಯದರ್ಶಿ/ಆಪ್ತ ಸಹಾಯಕರು
೧೦. ಶಾಖಾ ರಕ್ಷಾ ಕಡತ/ಕಂಪ್ಯೂಟರ್ ಸೆಲ್ /ಹೆಚ್ಚುವರಿ ಪ್ರತಿ